ಕರ್ನಾಟಕ ಸರ್ಕಾರ

GOVERNMENT OF KARNATAKAI

ಜಿಲ್ಲಾ ಪಂಚಾಯತ ಕಾರ್ಯಾಲಯ, ಬೆಳಗಾವಿ

ದೂರವಾಣಿ : 0831-2417809
ಫ್ಯಾಕ್ಸ್/Fax: 0831-2429662
e-mail: tscbgm@gmail.com

ಕ್ರಸಂ:ಜಿಪಂಬೆ:ಸ್ವಭಾಮಿ(ಗ್ರಾ):SLWM :2021-22 ದಿನಾಂಕ: 8 -02-2022

# ಪ್ರಕಟಣೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಬೆಳಗಾವಿ ಜಿಲ್ಲಾ ಪಂಚಾಯಿತಿಯಲ್ಲಿ ಖಾಲಿಯಿರುವ 01 ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ ಸಮಾಲೊಚಕ ಹುದ್ದೆಗೆ ತಾತ್ಕಾಲಿಕ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಸಮಾಲೋಚಕರನ್ನು ನೇಮಿಸಿಕೊಳ್ಳಲು ಅರ್ಜಿ ಕರೆಯಲಾಗಿದೆ. ಹುದ್ದೆಗಳ ವಿವರಗಳು, ವಿದ್ಯಾರ್ಹತೆ ಹಾಗೂ ಕಾರ್ಯಾನುಭವದ ವಿವರಗಳನ್ನು ಕೆಳಕಂಡಂತೆ ನೀಡಲಾಗಿದೆ.

| ಕ್ರ ಸಂ | ಹುದ್ದೆಯ ವಿವರ | ಒಟ್ಟು ಹುದ್ದೆ | ವಿದ್ಯಾರ್ಹತೆ ಮತ್ತು ಅನುಭವ | ಮಾಸಿಕ ಸಮಾಲೋಚನಾ ಶುಲ್ಕ |
|---|---|---|---|---|
| 1 | ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ ಸಮಾಲೊಚಕರು (SLWM Consultant) | 01 | Graduate in Environmental Engineering/ Civil Engineering with Specialization in Environmental Sciences from a recognized university only.<br>Minimum 3 years Experience in relevant field and should have worked in development sectors preferably in water, sanitation and rural development. | Rs.25,000/- |

1) ಗುತ್ತಿಗೆಯ ಅಥವಾ ಹೊರಗುತ್ತಿಗೆ ಅವಧಿ: ಮೇಲಿನ ಹುದ್ದೆ ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಯಾಗಿದ್ದು, ಒಂದು ವರ್ಷದ ಅವಧಿಗೆ ಗುತ್ತಿಗೆ ಅಥವಾ ಹೊರಗುತ್ತಿಗೆಯ ಆಧಾರದ ಮೇಲೆ ನೇಮಿಸಿಕೊಳ್ಳಲಾಗುವುದು ನಂತರ ಕಾಲಕಾಲಕ್ಕೆ ಅವರ ಕಾರ್ಯಕ್ಷಮತೆಯನ್ನು ಪರಿಶೀಲಿಸಿ ಮತ್ತು ಅಗತ್ಯಕ್ಕೆ ಅನುಗುಣವಾಗಿ ನವೀಕರಿಸಲಾಗುವುದು. ಒಂದೊಮ್ಮೆ ಅಭ್ಯರ್ಥಿಯ ಕಾರ್ಯಕ್ಷಮತೆ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿದ್ದರೆ ಅಂತಹ ಅಭ್ಯರ್ಥಿಗಳ ಕರಾರು ಒಪ್ಪಂದವನ್ನು ಒಂದು ತಿಂಗಳ ನೋಟೀಸ್ ನೀಡಿ ರದ್ದುಪಡಿಸಲಾಗುವುದು.

2) ವಯೋಮಾನ: ಪ್ರಕಟಣೆ ಹೊರಡಿಸಿದ ದಿನಾಂಕಕ್ಕೆ 45 ವರ್ಷಗಳು ಮೀರಿರಬಾರದು.

3) ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿಯನ್ನು ತುಂಬಿ, ವಯಸ್ಸಿನ ದೃಢೀಕರಣ, ವಿದ್ಯಾರ್ಹತೆ, ಅನುಭವ, ಪ್ರಮುಖ ಸಾಮರ್ಥ್ಯಗಳು, Resume ಹಾಗೂ ಅರ್ಜಿ ಜೊತೆಗೆ "ನಾನು ಈ ಹುದ್ದೆಗೆ ಯಾವ ರೀತಿ ಸೂಕ್ತನಾಗಿದ್ದೇನೆ" ಎಂಬುದರ ಬಗ್ಗೆ ಒಂದು ಪುಟದಲ್ಲಿ ಟಿಪ್ಪಣಿ ಬರೆದು ಅರ್ಜಿಯನ್ನು **ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ, ಬೆಳಗಾವಿ ಪಿನ್ ಕೋಡ್: 590001** ಈ ವಿಳಾಸಕ್ಕೆ ಅರ್ಜಿಯ ಹಾರ್ಡ್ ಪ್ರತಿಯನ್ನು ದಿನಾಂಕ 19.02.2022 ರ ಸಂಜೆ 5:30 ಗಂಟೆಯೊಳಗೆ ಸಲ್ಲಿಸಬೇಕು. ನಂತರ ಬಂದಂತಹ ಯಾವುದೇ ಅರ್ಜಿಗಳನ್ನು

ಸ್ವೀಕರಿಸುವುದಿಲ್ಲ.(ಅರ್ಜಿಯ ನಮೂನೆಯು Zilla Panchayat website: www.zpbelagavi.kar.nic.in/ ನೇಮಕಾತಿ ಲಿಂಕ್‌ನಲ್ಲಿ ಲಭ್ಯವಿರುತ್ತದೆ).

4) ಸ್ನಾತಕ / ಸ್ನಾತಕೋತ್ತರ ಪದವಿಯನ್ನು ದೂರ ಶಿಕ್ಷಣ ಮುಖಾಂತರ ಪಡೆದಿದ್ದರೆ, ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ ಹಾಗೂ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5) ಆಯ್ಕೆಯಾದ ಅಭ್ಯರ್ಥಿಯು ಇಲಾಖೆಯ ಅಥವಾ ಹೊರಗುತ್ತಿಗೆ ಸಂಸ್ಥೆಯೊಂದಿಗೆ ನಿಗದಿತ ನಮೂನೆಯಲ್ಲಿ ಕರಾರು ಒಪ್ಪಂದವನ್ನು ಮಾಡಿಕೊಳ್ಳಬೇಕು ಹಾಗೂ ಕಾರ್ಯಾನುಭವದ ಆಧಾರದ ಮೇಲೆ ಮಾಸಿಕ ಸಮಾಲೋಚನಾ ಶುಲ್ಕ ನಿಗದಿಪಡಿಸಲಾಗುವುದು.

6) ಕರಾರು ಒಪ್ಪಂದ ಮಾಡಿಕೊಂಡ ಅಭ್ಯರ್ಥಿಗೆ ಇಲಾಖೆಯಲ್ಲಿನ ಯಾವುದೇ ಹುದ್ದೆಗಳಲ್ಲಿ ವಿಲೀನಗೊಳ್ಳಲು / ಮುಂದುವರೆಯಲು ಯಾವುದೇ ಹಕ್ಕು ಇರುವುದಿಲ್ಲ.

7) ಕಿರುಪಟ್ಟಿ ಮಾಡಿದ ಅಭ್ಯರ್ಥಿಗಳಿಗೆ (Shortlisted candidates) ಅವರುಗಳಿಗೆ ಮಾತ್ರ ದೂರವಾಣಿ ಮುಖಾಂತರ ತಿಳಿಸಲಾಗುವುದು.

8) ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ/ಲಿಖಿತ ಪರೀಕ್ಷೆ ಜಿಲ್ಲಾ ಪಂಚಾಯಿತಿ ಕಛೇರಿಯಲ್ಲಿ ನಡೆಸಲಿದ್ದು, ನಿಗದಿಪಡಿಸಿದ ದಿನಾಂಕ ಮತ್ತು ವೇಳೆಯಲ್ಲಿ ಹಾಜರಾಗುವುದು.

9) ನೇಮಕಾತಿಯನ್ನು ಪೂರ್ಣವಾಗಿ ಮತ್ತು ಭಾಗಶಃ ರದ್ದು ಮಾಡುವ/ ಮುಂದೂಡುವ/ ಬದಲಾವಣೆ ಮಾಡುವ ಹಕ್ಕನ್ನು ಇಲಾಖೆಯು ಹೊಂದಿರುತ್ತದೆ.

10) ಜಿಲ್ಲಾ ಪಂಚಾಯಿತಿಯ ಹುದ್ದೆಗಳು ಜಿಲ್ಲಾಮಟ್ಟದ ಹುದ್ದೆಯಾಗಿರುವುದರಿಂದ ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸಬೇಕಾಗಿರುತ್ತದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ, ಬೆಳಗಾವಿ.